**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 240 ಗ್ರಾಪಂಅ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:29.02.2020

**ಸುತ್ತೋಲೆ**

**ವಿಷಯ:** ವಿಶ್ವ ಶ್ರವಣ ದಿನ 03ನೇ ಮಾರ್ಚ್ 2020 ರಂದು ರಾಷ್ಟ್ರೀಯ ಶ್ರವಣ ಜಾಗೃತಿ ಅಭಿಯಾನ ಅಭಿಯಾನ ಹಮ್ಮಿಕೊಳ್ಳುವ ಬಗ್ಗೆ.

******

ಶ್ರವಣ ನಷ್ಟವು ಇಂದು ಮಾನವರಲ್ಲಿ ಸಾಮಾನ್ಯವಾಗಿ ಕಂಡುಬರುವ ಸಂವೇದನಾ ಕೊರತೆಯಾಗಿದೆ. ಪ್ರಪಂಚದಾದ್ಯಂತ, ಇದು Years lived with Disability (YLD) ಗೆ ಎರಡನೇ ಪ್ರಮುಖ ಕಾರಣವಾಗಿದೆ. ನಮ್ಮ ಜನಸಂಖ್ಯೆಯ ಇನ್ನೂ ಹೆಚ್ಚಿನ ಶೇಕಡಾವಾರು ಜನರು ಮೇಲಿನ ಶ್ರವಣ ನಷ್ಟ ಮತ್ತು ಏಕಪಕ್ಷೀಯ (ಒಂದು ಬದಿಯ) ಶ್ರವಣ ನಷ್ಟದಿಂದ ಬಳಲುತ್ತಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕಿವುಡುತನವನ್ನು ತಡಗಟ್ಟುವ ಮತ್ತು ನಿಯಂತ್ರಿಸುವ ನಿಟ್ಟಿನಲ್ಲಿ ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದೆ.

ಪ್ರತಿ ವರ್ಷದ 03ನೇ ಮಾರ್ಚ್ 2020ನ್ನು "ವಿಶ್ವ ಶ್ರವಣ ದಿನ" ವನ್ನಾಗಿ ಆಚರಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ರಾಷ್ಟ್ರೀಯ ಶ್ರವಣ ಜಾಗೃತಿ ಅಭಿಯಾನ (National Hearing Awareness Campaign) ವನ್ನು ಹಮ್ಮಿಕೊಂಡಿದ್ದು, ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಹಯೋಗದೊಂದಿಗೆ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಮತ್ತು ಸಭೆಗಳನ್ನು ನಡೆಸಲು ಹಾಗೂ ಶ್ರವಣ ನಷ್ಟಕ್ಕೆ ಸಂಬಂಧಿಸಿದ ವಿಷಯಗಳ ಅರಿವು ಮೂಡಿಸುವ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಸೂಚಿಸಲಾಗಿದೆ.

1. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯಪಡೆ (Task Force) ಸಭೆಯನ್ನು ಆಯೋಜಿಸುವುದು.
2. ಶ್ರವಣ ಮತ್ತು ಸಜ್ಜುಗೊಳಿಸುವಿಕೆಗಾಗಿ ಜಾಗೃತಿ ಮೂಡಿಸುವ ಕುರಿತು ಜಿಲ್ಲಾ ಶ್ರವಣ ಜಾಗೃತಿ ಅಭಿಯಾನಕ್ಕಾಗಿ ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳು ಸಕ್ರಿಯವಾಗಿ ಪಾಲ್ಗೊಳ್ಳುವುದು.
3. ಗ್ರಾಮೀಣ ಪ್ರದೇಶಗಳಲ್ಲಿನ ಅಭಿಯಾನವನ್ನು ಪಂಚಾಯತಿಗಳು ಬೆಂಬಲಿಸುವುದು.
4. ಸಂದೇಶಗಳ ಪ್ರಸಾರಕ್ಕಾಗಿ ವ್ಯವಸ್ಥೆ ಮಾಡುವುದು.
5. ಅಭಿಯಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕಾರ್ಯಕ್ರಮದ ಮೇಲ್ವಿಚಾರಣೆಯನ್ನು ಗ್ರಾಮ ಪಂಚಾಯತಿ ಅಧ್ಯಕ್ಷರು ವಹಿಸಿ, ಸದರಿ ಗ್ರಾಮ ಪಂಚಾಯತಿಯ ಸದಸ್ಯರು ಮತ್ತು ಸ್ಥಳೀಯ ಸಮುದಾಯದ ಸದಸ್ಯರನ್ನು ಉದ್ದೇಶಿಸಿ ಮಾತನಾಡುವುದು.

ಅದರಂತೆ, ಎಲ್ಲಾ ಜಿಲ್ಲಾ ಪಂಚಾಯತಿಗಳು/ತಾಲ್ಲೂಕು ಪಂಚಾಯತಿಗಳು ಮತ್ತು ಗ್ರಾಮ ಪಂಚಾಯತಿಗಳು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಾಗೂ ತೆಗೆದುಕೊಂಡಿರುವ ಕ್ರಮದ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವರದಿ ಕಳುಹಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

(ಎಸ್.ಎ.ಅಶ್ರಫುಲ್ ಹಸನ್)
ನಿರ್ದೇಶಕರು, ಪಂಚಾಯತ್ ರಾಜ್ ಮತ್ತು ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಗ್ರಾಮ ಪಂಚಾಯಿತಿಗಳು –ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
5. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಕ ಕಡತ.

ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.